ಬೀದರ್ ಜಿಲ್ಲೆಯ ಖಾಸಗಿ ಪದವಿ ಕಾಲೇಜುಗಳಲ್ಲಿ ನಿವೃತ್ತಿ, ವರ್ಗಾವಣೆ ಹಾಗೂ ಮರಣ ಹೊಂದಿರುವ ಪ್ರಯುಕ್ತ ಖಾಲಿ ಇರುವ ಅನುಮೋದಿತ ಹುದ್ದೆಗಳು

ಬೋಧಕರು – 89

ಬೋಧಕೇತರರು – 32

ಆ) ಹೌದು.

ಇ) ಸರ್ಕಾರಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಖಾಲಿ ಇರುವ ಬೋಧಕ ಹುದ್ದೆಗಳಿಗೆ ಎದುರಾಗಿ ಅತಿಥಿ ಉಪನ್ಯಾಸಕರನ್ನು ನಿಗದಿತ ಸಂಭಾವನೆ ಮೇರೆಗೆ ನೇಮಿಸಿಕೊಳ್ಳಲು ಸಂಬಂದಿಸಿದ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಅನುಮತಿಯನ್ನು ನೀಡಲಾಗಿರುತ್ತದೆ. ಅದೇ ರೀತಿ ಖಾಸಗಿ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕರ ಹುದ್ದೆಗಳಿಗೆ ಎದುರಾಗಿ ಆಡಳಿತ ಮಂಡಳಿಗಳು ತಮ್ಮಲ್ಲಿರುವ ಸಂಪ್ಮೂಲಗಳನ್ನು ಬಳಸಿ ತಾತ್ಕಾಲಿಕವಾಗಿ ಉಪನ್ಯಾಸಕರನ್ನು ನೇಮಿಸಿಕೊಳ್ಳಬಹುದಾಗಿದೆ.

ದೇವಸ್ಥಾನಗಳಿಗೆ ಒದಗಿಸಿರುವ ಅನುದಾನ

327 : 157

ಶ್ರೀ ಸುನೀಲ್ ವಿ. ಹೆಗಡೆ

ಅ) ಕಳೆದ ಮೂರು ವರ್ಷಗಳಲ್ಲಿ ಹಳಿಯಾಳ ಜೋಯಿಡಾ ತಾಲ್ಲೂಕಿನ ವ್ಯಾಪ್ತಿಯ ಮುಜರಾಯಿ ದೇವಸ್ಥಾನಗಳಿಗೆ ಒದಗಿಸಿರುವ ಅನುದಾನ ಎಷ್ಟು; (ಅಂಕಿ-ಅಂಶಗಳೊಂದಿಗೆ ವಿವರ ಒದಗಿಸುವುದು).

ಆ) ಹಳಿಯಾಳ ಜೋಯಿಡಾ ವ್ಯಾಪ್ತಿಯಲ್ಲಿ ಅನುದಾನ ಬಿಡುಗಡೆಯಾಗದೆ ಬಾಕಿಯಿರುವ ಮುಜರಾಯಿ ದೇವಸ್ಥಾನಗಳ ಸಂಖ್ಯೆ: ಎಷ್ಟು; (ವಿವರ ಒದಗಿಸುವುದು);

ಇ) ಪ್ರಸಕ್ತ ಸಾಲಿನಲ್ಲಿ ದೇವಸ್ಥಾನಗಳಿಗೆ ಅನುದಾನ ಬಿಡುಗಡೆ ಮಾಡಲಾಗುವುದೇ;

ಈ) ಮುಜರಾಯಿ ಇಲಾಖೆಯಿಂದ ತಾಲ್ಲೂಕುಗಳಿಗೆ ಅನುದಾನ ಒದಗಿಸುವಾಗ ಅನುಸರಿಸಲಾಗುವ ಮಾನದಂಡಗಳೇನು? (ವಿವರ ನೀಡುವುದು)

ಶ್ರೀ ಕೋಟಾ ಶ್ರೀನಿವಾಸ ಪೂಜಾರಿ
ಮುಜರಾಯಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

ಅ) ಜೋಯಿಡಾ ತಾಲ್ಲೂಕಿನ ಶ್ರೀ ಉಳವಿ ಚನ್ನಬಸವೇಶ್ವರ ದೇವಾಲಯಕ್ಕೆ ರೂ.1.00 ಕೋಟಿ ಅನುದಾನವನ್ನು ಮಂಜೂರು ಮಾಡಲಾಗಿರುತ್ತದೆ.

ಆ) ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಯಲ್ಲಿ ಜೋಯಿಡಾ ತಾಲ್ಲೂಕಿನಲ್ಲಿ 66 ಮತ್ತು ಹಳಿಯಾಳ ತಾಲ್ಲೂಕಿನಲ್ಲಿ 83 ದೇವಾಲಯಗಳಿವೆ. ಯಾವುದೇ ದೇವಾಲಯಕ್ಕೆ ಅನುದಾನ ಮಂಜೂರಾಗಿರುವುದಿಲ್ಲ.

ಇ) ಅನುದಾನ ಕೋರಿ ಜಿಲ್ಲಾಧಿಕಾರಿಗಳಿಂದ ಪ್ರಸ್ತಾವನೆಯು. ಸ್ವೀಕೃತವಾಗಿಲ್ಲ ಅನುದಾನದ ಲಭ್ಯತೆಗನುಗುಣವಾಗಿ ಪರಿಶೀಲಿಸಲಾಗುವುದು.

ಈ) ರಾಜ್ಯದಲ್ಲಿನ ಧಾರ್ಮಿಕ ಸಂಸ್ಥೆಗಳು. ಪೂಜಾ ಸ್ಥಳ ದುರಸ್ಥಿ, ಜೀರ್ಣೋದ್ಧಾರ ಹಾಗೂ ನವನಿರ್ಮಾಣ ಉದ್ದೇಶಕ್ಕಾಗಿ ಅನುದಾನ ಮಂಜೂರು ಮಾಡುವ ಬಗ್ಗೆ ಹಾಗೂ ಮಂಜೂರು ಮಾಡಿದ ಅನುದಾನವನ್ನು ಬಿಡುಗಡೆ ಮಾಡುವ ಸಂದರ್ಭದಲ್ಲಿ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಸರ್ಕಾರವು ದಿನಾಂಕ 20.09.2010 ರಲ್ಲಿ ಸಂಖ್ಯೆ: ಕಂಇ 95 ಮುಅಬಿ 2010 ರಲ್ಲಿ ಪರಿಷ್ಕೃತ ಮಾರ್ಗಸೂಚಿ ಸುತ್ತೋಲೆಯನ್ನು ಹೊರಡಿಸಿದ್ದು, ಅದರ ಪ್ರಕಾರ ಕ್ರಮ ವಹಿಸಲಾಗುತ್ತಿದೆ.